Rural Ashraya Constituency name	2000-01 Target	2000-01 Completed	2001-02 Target	2001-02 Completed	2002-03 Target	2002-03 Completed
Udupi	46	45	202	191	200	43
Kundapura	6	6	5	5	53	2
Karkala	60	60	59	59	53	13
Brahmavara	29	28	13	11	43	6
Total	**141**	**139**	**279**	**266**	**340**	**64**

2002-03 ಹಾಗೂ 2003-04ನೇ ಸಾಲಿನಲ್ಲಿ ರಾಜ್ಯದಲ್ಲಿ ಹೊಸ ಪ್ರೌಢ ಶಾಲೆಗಳನ್ನು ಪ್ರಾರಂಭಿಸುವ ಬಗ್ಗೆ

2930(2683) ಶ್ರೀ ಜಯಪ್ರಕಾಶ್ ಹೆಗ್ಡೆ ಕೆ. (ಬ್ರಹ್ಮಾವರ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) 2002-03 ಮತ್ತು 2003-04ನೇ ಸಾಲಿನಲ್ಲಿ ಈವರೆಗೆ ರಾಜ್ಯದಲ್ಲಿ ಹೊಸದಾಗಿ ಎಷ್ಟು ಪ್ರೌಢ ಶಾಲೆಗಳನ್ನು ಸ್ಥಾಪಿಸಲು ಅನುಮೋದನೆ ನೀಡಲಾಗಿದೆ;

ಆ) ಯಾವ ಯಾವ ಪ್ರೌಢ ಶಾಲೆಗಳನ್ನು ಈಗಾಗಲೇ ತೆರೆಯಲಾಗಿದೆ; (ಕ್ಷೇತ್ರವಾರು ವಿವರ ನೀಡುವುದು)

ಇ) ಇನ್ನೆಷ್ಟು ಪ್ರೌಢ ಶಾಲೆಗಳನ್ನು ಎಲ್ಲೆಲ್ಲಿ ಪ್ರಾರಂಭಿಸಲಾಗುವುದು?

ಪ್ರೊ. ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ) 2002-03ನೇ ಸಾಲಿನಲ್ಲಿ 75 ಸರ್ಕಾರಿ ಪ್ರೌಢ ಶಾಲೆಗಳು ಮಂಜೂರಾಗಿದ್ದು ಇವುಗಳಲ್ಲಿ 5 ಶಾಲೆಗಳನ್ನು 2002-03 ನೇ ಸಾಲಿನಲ್ಲಿ ಪ್ರಾರಂಭಿಸಿದ್ದು ಉಳಿದ 70 ಶಾಲೆಗಳನ್ನು ಮಂಜೂರು ಮಾಡುವಾಗ 2002-03ನೇ ಸಾಲಿನ ಶೈಕ್ಷಣಿಕ ವರ್ಷದ ಅರ್ಧ ವರ್ಷ ಮುಕ್ತಾಯಗೊಂಡಿದ್ದರಿಂದ 2003-04ನೇ ಸಾಲಿನಲ್ಲಿ ತೆರೆಯಲು ಆಡಳಿತಾತ್ಮಕ ಮಂಜೂರಾತಿ ನೀಡಲಾಗಿರುತ್ತದೆ ಹಾಗೂ 2003-04ನೇ ಸಾಲಿಗೆ ಈ ವರೆವಿಗೆ 74 ಸರ್ಕಾರಿ ಪ್ರೌಢ ಶಾಲೆಗಳನ್ನು ಮಂಜೂರು ಮಾಡಿದೆ.

ಆ) ಅನುಬಂಧದಲ್ಲಿ ಲಗತ್ತಿಸಿದೆ.

ಇ) ಪರಿಶೀಲಿಸಲಾಗುತ್ತಿದೆ.

ಬ್ರಹ್ಮಾವರ ಕ್ಷೇತ್ರದಲ್ಲಿ ನೂತನ ಪ್ರೌಢ ಶಾಲೆಗಳನ್ನು ಪ್ರಾರಂಭಿಸುವುದು

2931(2684) ಶ್ರೀ ಜಯಪ್ರಕಾಶ್ ಹೆಗ್ಡೆ ಕೆ. (ಬ್ರಹ್ಮಾವರ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬ್ರಹ್ಮಾವರ ವಿಧಾನ ಸಭಾ ಕ್ಷೇತ್ರದಲ್ಲಿ ಮುಂದಿನ ಶೈಕ್ಷಣಿಕ ವರ್ಷಗಳಲ್ಲಿ ಎಷ್ಟು ನೂತನ ಪ್ರೌಢ ಶಾಲೆಗಳನ್ನು ಪ್ರಾರಂಭಿಸಲು ಯೋಜಿಸಲಾಗಿದೆ;

ಆ) ಅವುಗಳನ್ನು ಯಾವಾಗ ಪ್ರಾರಂಭಿಸಲಾಗುವುದು?

ಪ್ರೊ. ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ) 2004-05ನೇ ಸಾಲಿಗೆ ಹಾಗೂ ಮುಂದಿನ ವರ್ಷಗಳಲ್ಲಿ ಶಿಕ್ಷಣ ಇಲಾಖೆಗೆ ದೊರೆಯಬಹುದಾದ ಆಯವ್ಯಯವನ್ನು ಅವಲಂಬಿಸಿ. ಈ ಬಗ್ಗೆ ಆಯಾ ವರ್ಷದಲ್ಲಿ ಪ್ರಸ್ತಾವನೆಗಳನ್ನು ತರಿಸಿ ಪರಿಶೀಲಿಸಲಾಗುವುದು.